2) ಇದುವರೆವಿಗೂ ಈ ಕಟ್ಟಡಕ್ಕೆ ರೂ.48.272 ಲಕ್ಷ ವೆಚ್ಚ ಮಾಡಲಾಗಿದೆ. ಡಿಸೆಂಬರ್ 94ರ ನಂತರ ಇಲಾಖಾ ವತಿಯಿಂದ ಕಾಮಗಾರಿಯನ್ನು ಸ್ಥಗಿತಗೊಳಿಸಲಾಗಿದ್ದು, ಪ್ರಸ್ತುತ ಕಾಮಗಾರಿ ನಿಂತಿದೆ. ಈ ಮಧ್ಯ 93-94ರಿಂದ ಇದುವರೆವಿಗೂ ಆಯವ್ಯಯದಲ್ಲಿ ಯಾವುದೇ ಅನುದಾನ ಬಿಡುಗಡೆ ಮಾಡಿಲ್ಲ. ಅನುದಾನವಿಲ್ಲದೆ ಉಳಿಕೆ ಕೆಲಸವನ್ನು ಟೆಂಡರು ಕರೆದು ಗುತ್ತಿಗೆದಾರರನ್ನು ನೇಮಿಸುವುದು ಸಾಧ್ಯವಾಗಿಲ್ಲ. ಆಯವ್ಯಯದಲ್ಲಿ ಅಗತ್ಯವಾದ ಅನುದಾನವನ್ನು ಕ್ರೋಢೀಕರಿಸಿ, ಟೆಂಟರಮೂಲಕ ಗುತ್ತಿಗೆದಾರರಿಗೆ ವಹಿಸಿ ಕಾಮಗಾರಿಯನ್ನು ಪುನಃ ಪ್ರಾರಂಭಿಸಲಾಗುವುದು.

3) ಹೌದು. ಈ ಬಗ್ಗೆ ವಿಶ್ವಬ್ಯಾಂಕ್ ಯೋಜನೆಯ 3ನೇ ಹಂತದಲ್ಲಿ ಕಾಮಗಾರಿಯನ್ನು ಕೈಗೊಳ್ಳಲು ಕ್ರಮ ಕೈಗೊಳ್ಳಲಾಗಿದೆ.

ವಿಷಯ : ಶಿವಮೊಗ್ಗ ಆಸ್ಪತ್ರೆಯ ಕಟ್ಟಡ ಕಾಮಗಾರಿಯು ಅರ್ಧಕ್ಕೆ ನಿಂತಿರುವುದು.

1280 (1885)-ಶ್ರೀ ಎಸ್. ಕುಮಾರ್ ಬಂಗಾರಪ್ಪ (ಸೊರಬ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಶಿವಮೊಗ್ಗ ಮೆಗ್ಗಾನ್ ಆಸ್ಪತ್ರೆಯನ್ನು 1991-92ರಲ್ಲಿ 1200 ಹಾಸಿಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಿ ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸಲಾಯಿತು. ಕಾಮಗಾರಿಯ ಕೆಲಸ ಅರ್ಧಕ್ಕೆ ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಯಾವ ಕಾರಣದಿಂದ ಅರ್ಧಕ್ಕೆ ನಿಂತಿರುತ್ತದೆ, ಮತ್ತು ಪೂರ್ಣಗೊಳಿಸಲು ಸರ್ಕಾರವು? ತೆಗೆದುಕೊಂಡಿರುವ ಕ್ರಮವೇನು?

ಇ) ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲು ಎಷ್ಟು ಕಾಲಾವಕಾಶ ಬೇಕಾಗುವುದು?

ಡಾ॥ ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಕಾಮಗಾರಿಯು ಅರ್ಧಕ್ಕೆ ನಿಂತಿರುವ ಮಾಹಿತಿ ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಶೀಘ್ರವಾಗಿ ಪೂರೈಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದು.